ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 30-6-2017

# ಪತ್ರಿಕಾ ಪ್ರಕಟಣೆ

## ಕೃಷಿ ಉತ್ಪನ್ನಗಳ ಬೆಂಬಲ ಬೆಲೆ ಹೆಚ್ಚಿಸಲು ಕೇಂದ್ರ ಸರ್ಕಾರಕ್ಕೆ ಮನವಿ- ಕೃಷ್ಣ ಬೈರೇಗೌಡ

**ಬೆಂಗಳೂರು, ಜೂನ್ 29 (ಕರ್ನಾಟಕ ವಾರ್ತೆ)**

ಕಳೆದ ವಾರ ನಿಗದಿಪಡಿಸಿರುವ ಬೆಂಬಲ ಬೆಲೆಯನ್ನು ಪರಿಷ್ಕರಿಸಿ ಶೇ 15 ರಷ್ಟು ಹೆಚ್ಚಳ ಮಾಡುವಂತೆ ಮುಖ್ಯಮಂತ್ರಿ ಅವರ ಮೂಲಕ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗುವುದು ಎಂದು ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ವಿಕಾಸಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೃಷಿ ಸಚಿವರು ಸಂಕಷ್ಟದಲ್ಲಿರುವ ರೈತರ ಆದಾಯವನ್ನು ದ್ವಿಗುಣಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕೃಷಿ ಉತ್ಪನ್ನಗಳ ಬೆಂಬಲ ಬೆಲೆಯನ್ನು ಇನ್ನಷ್ಟು ಹೆಚ್ಚಳ ಮಾಡಬೇಕಿತ್ತು ಎಂದು ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಯು.ಪಿ.ಎ. ಸರ್ಕಾರದ ಅವಧಿಯಲ್ಲಿ ಹಾಗೂ ಅದಕ್ಕೂ ಹಿಂದೆ ಆಡಳಿತ ನಡೆಸಿದ ಸರ್ಕಾರಗಳು ಕೃಷಿ ಉತ್ಪನ್ನ ಬೆಂಬಲ ಬೆಲೆ ನಿಗದಿಪಡಿಸುವಾಗ ಸರಾಸರಿ ಶೇ 15 ರಷ್ಟು ಬೆಂಬಲ ಬೆಲೆ ಹೆಚ್ಚು ಮಾಡಿದ್ದವು. ಆದರೆ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸರಾಸರಿ ಶೇ 5 ರಷ್ಟು ಮಾತ್ರ ಹೆಚ್ಚಳ ಮಾಡಲಾಗಿದೆ. ಬೆಂಬಲ ಬೆಲೆ ನಿಗದಿಪಡಿಸುವಾಗ ಕೃಷಿ ಉತ್ಪನ್ನಗಳ ಉತ್ಪಾದನಾ ವೆಚ್ಚ, ಹಣದುಬ್ಬರ ಪ್ರಮಾಣವನ್ನು ಪರಿಗಣನೆಗೆ ತೆಗೆದುಕೊಂಡಿಲ್ಲ ಎಂದ ಕೃಷಿ ಸಚಿವರು ಹಣದುಬ್ಬರದ ಪ್ರಮಾಣ ಶೇ 6 ರಷ್ಟಿದ್ದು ಕೃಷಿ ಉತ್ಪನ್ನಗಳ ಬೆಂಬಲ ಬೆಲೆ ಶೇ 5 ರಷ್ಟು ಹೆಚ್ಚಳ ಮಾಡಿದರೂ ರೈತರ ಆದಾಯದಲ್ಲಿ ಕನಿಷ್ಠ ಶೇ ಒಂದರಷ್ಟು ಆದಾಯ ಕೊರತೆಯಾಗುತ್ತದೆ ಎಂದು ಕೃಷಿ ಸಚಿವರು ತಿಳಿಸಿದರು.

ಕೃಷಿ ಉತ್ಪನ್ನಗಳ ಬೆಂಬಲ ಬೆಲೆಯು ರೈತರ ಆದಾಯ ಅವಲಂಬಿಸಿರುತ್ತದೆ. ಬೆಂಬಲ ಬೆಲೆ ಹೆಚ್ಚಾದರೆ ಮಾರುಕಟ್ಟೆಯಲ್ಲಿ ಕೃಷಿ ಉತ್ಪನ್ನಗಳ ಬೆಲೆಯು ಹೆಚ್ಚಾಗಿ ರೈತರು ಆರ್ಥಿಕವಾಗಿ ಸದೃಢರಾಗುತ್ತಾರೆ ಎಂದು ತಿಳಿಸಿದ ಕೃಷಿ ಸಚಿವರು ಕೇಂದ್ರ ಸರ್ಕಾರ ಬೆಂಬಲ ಬೆಲೆ ನಿಗದಿ ಮಾಡಿರುವುದರಿಂದ ರಾಜ್ಯದ ರೈತರಿಗೆ ಅಷ್ಟೇನೂ ಅನುಕೂಲವಾಗುವುದಿಲ್ಲ ಎಂದು ಕೃಷಿ ಸಚಿವರು ತಿಳಿಸಿದರು.

ರಾಜ್ಯ ಸರ್ಕಾರ ಕೃಷಿ ಉತ್ಪನ್ನಗಳ ಬೆಲೆ ಕಡಿಮೆಯಾದಾಗಲೆಲ್ಲ ಮಾರುಕಟ್ಟೆ ಮಧ್ಯ ಪ್ರವೇಶಿಸಿ ರೈತರಿಗೆ ಪ್ರೋತ್ಸಾಹಧನ ನೀಡುತ್ತಾ ಬಂದಿದೆ ಎಂದ ಅವರು ಕೇಂದ್ರ ಸರ್ಕಾರ ಹಿಂಗಾರು ಹಂಗಾಮಿನ ಬೆಳೆ ನಷ್ಟದ ಪರಿಹಾರದ ಹಣವನ್ನು ಸುಮಾರು 1,200 ಕೋಟಿ ರೂಪಾಯಿ ಬಿಡುಗಡೆ ಮಾಡುತ್ತದೆ ಎಂಬ ನಿರೀಕ್ಷೆಯಲ್ಲಿದ್ದೆವು. ಆದರೆ ಕೇಂದ್ರ ಸರ್ಕಾರ 795 ಕೋಟಿ ರೂ. ಬಿಡುಗಡೆಗೆ ಮಂಜೂರಾತಿ ನೀಡಿದೆ. ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡಿದ ತಕ್ಷಣ ರೈತರಿಗೆ ಬೆಲೆ ನಷ್ಟದ ಪರಿಹಾರದ ಹಣವನ್ನು ನೀಡಲಾಗುವುದು ಎಂದರು.

**<u>ಸಿರಿಧಾನ್ಯ ಬೆಳೆಗೆ ಆದ್ಯತೆ:</u>**

ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸುವ ಸಂಬಂಧ ಸುಮಾರು 393 ಗ್ರಾಮಗುಚ್ಛಗಳನ್ನು ನಿರ್ಮಾಣ ಮಾಡಲಾಗುವುದು. ಈ ಕಾರ್ಯಕ್ರಮಕ್ಕೆ 34 ಕೋಟಿ ರೂ. ಹಣ ಇಡಲಾಗಿದ್ದು ಸಿರಿಧಾನ್ಯಗಳನ್ನು ಬೆಳೆಯುವ ರೈತರಿಗೆ ಪ್ರತಿ ಹೆಕ್ಟೇರ್ ಪ್ರದೇಶಕ್ಕೆ ಎರಡುವರೆ ಸಾವಿರ ರೂಪಾಯಿಗಳನ್ನು ಪ್ರೋತ್ಸಾಹ ಧನ ನೀಡಲಾಗುವುದು ಎಂದು ಕೃಷಿ ಸಚಿವರು ಹೇಳಿದರು.

**<u>ಮುಂಗಾರು ಮಳೆ ಕೊರತೆ:</u>**

ಮುಂಗಾರು ಮಳೆ ಕೊರತೆ ಇದ್ದರೂ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ 17.5 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಬಿತ್ತನೆ ಕಾರ್ಯ ನಡೆದಿದ್ದು, ಈ ವರ್ಷ ಮುಂಗಾರಿನಲ್ಲಿ ಸುಮಾರು 73 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯ ಗುರಿಹೊಂದಲಾಗಿದೆ ಎಂದ ಸಚಿವರು ಕಳೆದ ವರ್ಷ ಈ ದಿನಕ್ಕೆ ಹೋಲಿಸಿಕೊಂಡಲ್ಲಿ 26 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ನಡೆದಿತ್ತು ಎಂದು ಸಚಿವರು ತಿಳಿಸಿದರು.

ಮುಂಗಾರು ಹಂಗಾಮಿನಲ್ಲಿ ಜುಲೈ ಅಂತ್ಯದವರೆಗೂ ಮಳೆ ಬರುವ ನಿರೀಕ್ಷೆ ಇದೆ ಅಲ್ಲಿಯವರೆಗೆ ರಾಜ್ಯಹದಲ್ಲಿ ಬಿತ್ತನೆ ಕಾರ್ಯ ನಡೆಯಲಿದೆ ಎಂದ ಸಚಿವರು ಮುಂಗಾರು ಹಂಗಾಮಿಗೆ ರೈತರಿಗೆ ಅಗತ್ಯವಿರುವ ಬಿತ್ತನೆ ಬೀಜ, ರಸಗೊಬ್ಬರಗಳನ್ನು ಸಾಕಷ್ಟು

ಪ್ರಮಾಣದಲ್ಲಿ ದಾಸ್ತಾನಿದ್ದು ರಾಜ್ಯಹದಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆ ಬರದಂತೆ ಜಾಗ್ರತೆ ವಹಿಸಲಾಗಿದೆ ಎಂದರು.

**ಜಿ.ಎಸ್.ಟಿ ಕೃಷಿಕ್ಷೇತ್ರದ ಮೇಲೆ ಅಷ್ಟೇನು ಪರಿಣಾಮ ಬೀರದು:**

ಇಂದು ಮಧ್ಯರಾತ್ರಿಯಿಂದ ಜಾರಿಗೆ ಬರಲಿರುವ ಏಕರೂಪದ ಸರಕು ಸೇವಾ ತೆರಿಗೆಯಿಂದ ಕೃಷಿ ಕ್ಷೇತ್ರದ ಮೇಲೆ ಭಾರಿ ವ್ಯತ್ಯಾಸ ಆಗುವುದಿಲ್ಲ ಎಂದು ಅಭಿಪ್ರಾಯಪಟ್ಟ ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ಜಿ.ಎಸ್.ಟಿ. ಜಾರಿಯಿಂದ ಶೇ ಒಂದರಿಂದ ಎರಡರಷ್ಟು ತೆರಿಗೆಯಲ್ಲಿ ವ್ಯತ್ಯಾಸ ಉಂಟಾಗಬಹುದು ಎಂದು ತಿಳಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

## ಆರನೇ ವೇತನ ಆಯೋಗದ ಕಚೇರಿ ಕಾಫಿ ಮಂಡಳಿಗೆ ಸ್ಥಳಾಂತರ

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರದ ನಿವೃತ್ತ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ಎಂ.ಆರ್. ಶ್ರೀನಿವಾಸಮೂರ್ತಿ ಅವರ ಅಧ್ಯಕ್ಷತೆಯ ಆರನೇ ವೇತನ ಆಯೋಗ ಇಂದು ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ರಸ್ತೆಯ ಕಾಫಿ ಮಂಡಳಿಯ ಎರಡನೇ ಮಹಡಿಯಲ್ಲಿ ವಿದ್ಯುಕ್ತವಾಗಿ ಕಾರ್ಯಾರಂಭ ಮಾಡಿದೆ.

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಕಚೇರಿಯಲ್ಲಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದ ಆಯೋಗ ಇಂದು ಕಾಫಿ ಮಂಡಳಿಗೆ ಸ್ಥಳಾಂತರಗೊಂಡಿತು.

ಆಯೋಗದ ಅಧ್ಯಕ್ಷ ಶ್ರೀ ಎಂ.ಆರ್. ಶ್ರೀನಿವಾಸಮೂರ್ತಿ, ಸದಸ್ಯರಾದ ಮಹಮದ್ ಸನಾವುಲ್ಲಾ ಹಾಗೂ ಆರ್.ಎಸ್. ಪೋಂಡೆ ಹಾಗೂ ಆಯೋಗದ ಸದಸ್ಯ ಕಾರ್ಯದರ್ಶಿ ಮಂಜುನಾಥ ನಾಯಕ್ ಅವರು ಇಂದು ಕಾಫಿ ಮಂಡಳಿಯ ಕಚೇರಿಗೆ ಆಗಮಿಸಿ ತಮ್ಮ ಕೆಲಸ ಕಾರ್ಯಗಳನ್ನು ಮುಂದುವರೆಸಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ ಹಾಗೂ ಜಂಟಿ ನಿರ್ದೇಶಕ ಹೆಚ್.ಬಿ. ದಿನೇಶ್ ಅವರು ಉಪಸ್ಥಿತರಿದ್ದರು.

**ಆಯೋಗದ ಕಚೇರಿ ವಿಳಾಸ** : ಸದಸ್ಯ ಕಾರ್ಯದರ್ಶಿಗಳು, ಆರನೇ ವೇತನ ಆಯೋಗ, ಎರಡನೇ ಮಹಡಿ, ಕಾಫಿ ಮಂಡಳಿ, ಅಂಬೇಡ್ಕರ್ ವೀದಿ, ಬೆಂಗಳೂರು.

ಎಸ್‌ಎಂ:ಜೆಡಿ:ಜಿಪಿಆರ್.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಬೆಂಗಳೂರು, ಜೂನ್ 29 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು 2011 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳಿಗೆ ಮಾತ್ರ ಒಂದು ವಿಶೇಷ ಅವಕಾಶವನ್ನು ನೀಡಿ ಅವರ ಪೂರ್ವಭಾವಿ ಪರೀಕ್ಷೆಯ ನೋಂದಣಿ ಸಂಖ್ಯೆಯನ್ನು ನಮೂದಿಸಿ (ನೋಂದಣಿ ಸಂಖ್ಯೆ ಗೊತ್ತಿಲ್ಲದಂತಹ ಅಭ್ಯರ್ಥಿಗಳು ಅವರ ಹೆಸರು ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ನೋಂದಣಿ ಸಂಖ್ಯೆಯನ್ನು ಪಡೆದುಕೊಳ್ಳಬಹುದು), ಜೂನ್ 29 ರಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು. ಅರ್ಜಿ ಸಲ್ಲಿಸಲು ಸಲ್ಲಿಸಲು ಜುಲೈ 15 ರ ರಾತ್ರಿ 11.45 ಗಂಟೆವರೆಗೆ) ಹಾಗೂ ಶುಲ್ಕ ಪಾವತಿಸಲು ಜುಲೈ 17 (ಅಂಚೆ ಕಚೇರಿಯ ವೇಳೆಯೊಳಗೆ) ಆಗಿರುತ್ತದೆ.

ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್‌ಸೈಟ್ http://kpsc.kar.nic.in/Notification ಅನ್ನು ನೋಡಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಪತ್ರಕರ್ತರ ಮಾಸಾಶನ ಸಮಿತಿ ತಿದ್ದುಪಡಿ ಆದೇಶ

**ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)**

**ಹಾಲಿ ಜಾರಿಯಲ್ಲಿರುವ ಪತ್ರಕರ್ತರ ಮಾಸಾಶನ ಸಮಿತಿಯ ಸದಸ್ಯರುಗಳಲ್ಲಿ ಶ್ರೀಮತಿ ಶಾಂತಮ್ಮ, ನಿವೃತ್ತ ಪತ್ರಕರ್ತರು "ಎಂಬುದರ ಬದಲಾಗಿ ಶ್ರೀಮತಿ ಶಾಂತಕುಮಾರಿ, ಪತ್ರಕರ್ತರು ಎಂದು ತಿದ್ದುಪಡಿ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.**

# Office Shifted

Bengaluru, June 30(Karnataka Information)

Office of the 6th Pay Commission shifted to 2nd floor of Coffee Board in Dr. B.R. Ambedkar Veedhi, Bangalore today.

The commission was temporarily functioning at Karnataka State Finance Corporation Building. Chairman of the commission, M.R. Srinivasa Murthy, retired Additional Chief Secretary to Government and members of the commission Mohmmad Sanaulla and R.S. Ponde and member secretary Manjunath Naik arrived at the newly shifted office and started functioning.

New Address of the Commission:
Member Secretary, 6th Pay Commission,
2nd Floor, Coffee Board, Dr. B.R. Ambedkar Veedhi,
Bengaluru -560 001